Akashvani: Bangalore
National Bulletin In Kannada
08.05.2026: 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

08.05.2026: 7.35AM
********

**ಮುಖ್ಯಾಂಶಗಳು :**

1. ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಕೋಲ್ಕತ್ತಾಗೆ ಭೇಟಿ; ನೂತನ ಬಿಜೆಪಿ ಶಾಸಕರೊಂದಿಗೆ ಮಹತ್ವದ ಸಭೆ

2. ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾರತ - ವಿಯಟ್ನಾಂಗೆ ವಿಫುಲ ಅವಕಾಶ - ಮುಂಬೈನಲ್ಲಿ ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ಅಭಿಮತ

3. ೨೦೨೦ ರಿಂದ ಭಾರತದ ಕಡಲ ಕ್ಷೇತ್ರದಲ್ಲಿ ಮಹಿಳೆಯರ ಭಾಗವಹಿಸುವಿಕೆ ಶೇಕಡ ೩೪೦ರಷ್ಟು ಹೆಚ್ಚಾಗಿದೆ - ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್

4. ಆಕಾಶವಾಣಿಯ ೯೦ ವರ್ಷಗಳ ಸಂಭ್ರಮಾಚರಣೆ; ಬೆಂಗಳೂರಿನಲ್ಲಿ ವಾಕಥಾನ್-೨೦೨೬ ಆರಂಭ

5. ಏಷ್ಯನ್ ಬಾಕ್ಸಿಂಗ್ ಚಾಂಪಿಯನ್ ಶಿಪ್; ಭಾರತದ ೧೭ ವರ್ಷದೊಳಗಿನ ಬಾಲಕಿಯರಿಂದ ೧೨ ಪದಕ ಖಚಿತ

**********

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದು ಕೋಲ್ಕತ್ತಾಗೆ ಭೇಟಿ ನೀಡಲಿದ್ದು, ನೂತನವಾಗಿ ಆಯ್ಕೆಯಾದ ಬಿಜೆಪಿ ಶಾಸಕರೊಂದಿಗೆ ಮಹತ್ವದ ಸಭೆ ನಡೆಸಲಿದ್ದಾರೆ. ಈ ಸಭೆಯಲ್ಲಿ ಪಕ್ಷದ ಶಾಸಕಾಂಗ ನಾಯಕನ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಖ್ಯಾತ ಕವಿ ರವೀಂದ್ರನಾಥ ಠಾಗೋರ್ ಅವರ ಜನ್ಮದಿನದ ಅಂಗವಾಗಿ ನಾಳೆ ರಾಜ್ಯದ ನೂತನ ಮುಖ್ಯಮಂತ್ರಿ ಹಾಗೂ ಸಚಿವ ಸಂಪುಟದ ಸದಸ್ಯರು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಕೋಲ್ಕತ್ತಾದ ಬ್ರಿಗೇಡ್ ಪರೇಡ್

ಮೈದಾನದಲ್ಲಿ ಸಮಾರಂಭಕ್ಕೆ ಸಕಲ ಸಿದ್ಧತೆಗಳು ನಡೆಯುತ್ತಿದ್ದು, ಅಗತ್ಯ ಆಡಳಿತಾತ್ಮಕ ಸಭೆಗಳೊಂದಿಗೆ ಬಿಗಿ ಭದ್ರತಾ ವ್ಯವಸ್ಥೆಯನ್ನು ಕೈಗೊಳ್ಳಲಾಗಿದೆ. ಈ ಸಮಾರಂಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿಯ ಹಿರಿಯ ನಾಯಕರು ಹಾಗೂ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುವ ನಿರೀಕ್ಷೆಯಿದೆ.

**********

ಬದಲಾಗುತ್ತಿರುವ ಇಂದಿನ ಜಾಗತಿಕ ವ್ಯವಸ್ಥೆಯಲ್ಲಿ ಭಾರತ ಮತ್ತು ವಿಯೆಟ್ನಾಂ ರಾಷ್ಟ್ರಗಳಿಗೆ ಜಾಗತಿಕ ಪೂರೈಕೆ ಸರಪಳಿಯಲ್ಲಿ ಪ್ರಮುಖ ಪಾತ್ರ ವಹಿಸಲು ಹೆಚ್ಚಿನ ಅವಕಾಶಗಳಿವೆ ಎಂದು ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ತಿಳಿಸಿದ್ದಾರೆ. ಮುಂಬೈನಲ್ಲಿ ನಡೆದ ಭಾರತ-ವಿಯೆಟ್ನಾಂ ಉದ್ಯಮ ವೇದಿಕೆಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಜಾಗತಿಕ ಸನ್ನಿವೇಶ ಒಂದು ಸವಾಲಾಗಿದ್ದರೂ, ಉಭಯ ದೇಶಗಳ ನಡುವಿನ ಸಹಕಾರವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಒಂದು ಉತ್ತಮ ಅವಕಾಶವಾಗಿದೆ ಎಂದು ಆಶಯ ವ್ಯಕ್ತಪಡಿಸಿದರು.ಇದೇ ಸಂದರ್ಭದಲ್ಲಿ ಮಾತನಾಡಿದ ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ತಂತ್ರಜ್ಞಾನ ಮತ್ತು ಉತ್ಪಾದನಾ ವಲಯದಲ್ಲಿನ ಉದ್ಯಮಿಗಳು ಹಾಗೂ ವೃತ್ತಿಪರರು ಏಷ್ಯಾದ ಭವಿಷ್ಯವನ್ನು ರೂಪಿಸುವಲ್ಲಿ ಭಾರತ ಮತ್ತು ವಿಯೆಟ್ನಾಂ ಪ್ರಮುಖ ಶಕ್ತಿಯಾಗಲಿವೆ ಎಂದು ಅಭಿಪ್ರಾಯಪಟ್ಟರು.

**********

ಭಾರತ ಮತ್ತು ವಿಯೆಟ್ನಾಂ ರಾಷ್ಟ್ರಗಳು ಉದಯೋನ್ಮುಖ ತಂತ್ರಜ್ಞಾನ, ಸಂಶೋಧನೆ ಮತ್ತು ನವೋದ್ಯಮ ಪರಿಸರ ವ್ಯವಸ್ಥೆಗಳಲ್ಲಿ ಸಹಕಾರವನ್ನು ಮತ್ತಷ್ಟು ಬಲಪಡಿಸಲು ನಿರ್ಧರಿಸಿವೆ. ನವದೆಹಲಿಯಲ್ಲಿ ನಿನ್ನೆ ನಡೆದ ದ್ವಿಪಕ್ಷೀಯ ಮಾತುಕತೆಯಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹಾಗೂ ವಿಯೆಟ್ನಾಂನ ಸಚಿವ ಡಾ. ವೂ ಹೈ ಕ್ವಾನ್, ಕೃತಕ ಬುದ್ಧಿಮತ್ತೆ, ಸೈಬರ್ ಭದ್ರತೆ ಮತ್ತು ತಂತ್ರಜ್ಞಾನ ವರ್ಗಾವಣಾ ಉಪಕ್ರಮಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು. ಈ ವೇಳೆ ಮಾತನಾಡಿದ ಸಚಿವ ಡಾ. ಜಿತೇಂದ್ರ ಸಿಂಗ್, ಕಳೆದ ಒಂದು ದಶಕದಲ್ಲಿ ಉಭಯ ದೇಶಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯು ಹೊಸ ವೇಗವನ್ನು ಪಡೆದುಕೊಂಡಿದೆ. ಭಾರತ-ಆಸಿಯಾನ್ ಸಂಶೋಧನೆ ಮತ್ತು ತರಬೇತಿ ಫೆಲೋಶಿಪ್

ಕಾರ್ಯಕ್ರಮದ ಅಡಿಯಲ್ಲಿ ವಿಯೆಟ್ನಾಂನ ಹತ್ತು ಸಂಶೋಧಕರು ಈಗಾಗಲೇ ಪ್ರಯೋಜನ ಪಡೆದಿದ್ದಾರೆ ಎಂದು ಮಾಹಿತಿ ನೀಡಿದರು.

**********

ಬಿಹಾರ ಸರ್ಕಾರದಲ್ಲಿ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಎಲ್ಲರಿಗೂ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಜ್ಯದ ಸರ್ವತೋಮುಖ ಅಭಿವೃದ್ಧಿಯ ಕಡೆಗೆ ಸಚಿವರ ಬದ್ಧತೆಯು ಬಿಹಾರವನ್ನು ಸಮೃದ್ಧಿಯ ಹೊಸ ಎತ್ತರಕ್ಕೆ ಕೊಂಡೊಯ್ಯುತ್ತದೆ ಎಂದು ಪ್ರಧಾನಿ ವಿಶ್ವಾಸ ವ್ಯಕ್ತಪಡಿಸಿದರು. ಬಲಿಷ್ಠ ಬಿಹಾರ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವ ಸಂಕಲ್ಪವನ್ನು ಸಾಕಾರಗೊಳಿಸಲು ಎಲ್ಲರೂ ಒಟ್ಟಾಗಿ ಕೆಲಸ ಮಾಡುವಂತೆ ಅವರು ಕರೆ ನೀಡಿದರು. ಪಾಟ್ನಾ ಭೇಟಿಯ ಸಂದರ್ಭದಲ್ಲಿ ಬಿಹಾರದ ಜನರು ತೋರಿಸಿದ ಪ್ರೀತಿ ಮತ್ತು ಆಶೀರ್ವಾದಗಳಿಗೆ ಪ್ರಧಾನಿಯವರು ಕೃತಜ್ಞತೆ ಸಲ್ಲಿಸಿದರು.ತಮಗೆ ದೊರೆತ ಆತ್ಮೀಯ ಸ್ವಾಗತದಿಂದ ತಾವು ಭಾವುಕರಾಗಿರುವುದಾಗಿ ತಿಳಿಸಿದ ಪ್ರಧಾನಿ, ಜನರ ಬೆಂಬಲ ಮತ್ತು ಉತ್ಸಾಹಕ್ಕೆ ಧನ್ಯವಾದ ಅರ್ಪಿಸಿದರು. ಜನರಲ್ಲಿ ಕಂಡುಬಂದ ಅಭೂತಪೂರ್ವ ಉತ್ಸಾಹವು ಅಭಿವೃದ್ಧಿ ಮತ್ತು ಸಾರ್ವಜನಿಕ ಸೇವೆಯ ಕಡೆಗೆ ಸರ್ಕಾರದ ಬದ್ಧತೆಗೆ ಬಲವಾದ ಸಾರ್ವಜನಿಕ ಬೆಂಬಲವನ್ನು ಪ್ರತಿಬಿಂಬಿಸುತ್ತದೆ ಎಂದು ಪ್ರಧಾನಿ ತಿಳಿಸಿದರು.

**********

೨೦೨೦ರಿಂದ ಭಾರತದ ಕಡಲ ವಲಯದಲ್ಲಿ ಮಹಿಳೆಯರ ಭಾಗವಹಿಸುವಿಕೆ ಶೇಕಡ ೩೪೦ರಷ್ಟು ಹೆಚ್ಚಾಗಿದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗ ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ೧೦ನೇ ಹಿಂದೂ ಮಹಾಸಾಗರ ಸಂವಾದದಲ್ಲಿ ಮಾತನಾಡಿದ ಅವರು,  ಸಾಗರ್ ಮೇ ಸಮ್ಮಾನ್ ನಂತಹ ಉಪಕ್ರಮಗಳ ಮೂಲಕ, ಸರ್ಕಾರವು ಕಡಲ ವಲಯದಲ್ಲಿ ಮಹಿಳೆಯರಿಗೆ ಘನತೆ ಮತ್ತು ನಾಯಕತ್ವದ ಅವಕಾಶಗಳನ್ನು ಹೆಚ್ಚಿಸುತ್ತಿದೆ ಎಂದು ಹೇಳಿದರು. ಆರ್ಥಿಕ ಬೆಳವಣಿಗೆಯನ್ನು ಸಾಮಾಜಿಕ ಸಬಲೀಕರಣದೊಂದಿಗೆ ಸಂಯೋಜಿಸುವ ಮೂಲಕ ಭಾರತದ ವಿಶಾಲ ಕಡಲ ದೃಷ್ಟಿಕೋನದಲ್ಲಿ ಮಹಿಳೆಯರ ಭಾಗವಹಿಸುವಿಕೆಗೆ ಅವಕಾಶ ಕಲ್ಪಿಸಿದೆ. ಸುರಕ್ಷಿತ, ಸುಭದ್ರ ಮತ್ತು ಸ್ಥಿರವಾದ ಹಿಂದೂ ಮಹಾಸಾಗರ ಪ್ರದೇಶವನ್ನು ಮುನ್ನಡೆಸಲು ಎಲ್ಲಾ ಪಾಲುದಾರರೊಂದಿಗೆ ಕೆಲಸ ಮಾಡಲು ದೇಶವು ಬದ್ಧವಾಗಿದೆ ಎಂದು ಅವರು ಹೇಳಿದರು.

**********

ಆಕಾಶವಾಣಿಯ ವೈಭವಯುತ ೯೦ ವರ್ಷಗಳ ಸಂಭ್ರಮಾಚರಣೆಯ ಅಂಗವಾಗಿ ಬೆಂಗಳೂರು ಆಕಾಶವಾಣಿ ಕೇಂದ್ರ ಇಂದು 'ವಾಕಥಾನ್-೨೦೨೬' ಎಂಬ ವಿಶೇಷ ಜಾಥಾವನ್ನು ಆಯೋಜಿಸಿದೆ. '೯೦ ವರ್ಷಗಳ ಸಾರ್ಥಕ ಧ್ವನಿ: ಸಂಸ್ಕೃತಿ ಹಾಗೂ ಸದಭಿರುಚಿಯ ಸಂಪರ್ಕ ಸೇತು' ಎಂಬ ಘೋಷವಾಕ್ಯದೊಂದಿಗೆ ಬೆಂಗಳೂರಿನ ರಾಜಭವನ ರಸ್ತೆಯಲ್ಲಿರುವ ಆಕಾಶವಾಣಿ ಕೇಂದ್ರದಿಂದ ಜಾಥಾ ಪ್ರಾರಂಭವಾಗಿದೆ. ದಶಕಗಳ ಕಾಲ ನಾಡಿನ ಕಲೆ, ಸಾಹಿತ್ಯ ಮತ್ತು ಪರಂಪರೆಯನ್ನು ಮನೆಮನೆಗೆ ತಲುಪಿಸಿದ ಆಕಾಶವಾಣಿಯ ಮೈಲಿಗಲ್ಲನ್ನು ಸ್ಮರಿಸಲು ಈ ವಾಕಥಾನ್ ಹಮ್ಮಿಕೊಳ್ಳಲಾಗಿದೆ. ನಾಡಿನ ಸಂಸ್ಕೃತಿ ಮತ್ತು ಸಾರ್ವಜನಿಕರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಆಯೋಜಿಸಲಾಗಿರುವ ಈ ವಿಶೇಷ ನಡಿಗೆಯಲ್ಲಿ ಆಕಾಶವಾಣಿ ಸಿಬ್ಬಂದಿ, ಕ್ರೀಡಾಪಟುಗಳು ಹಾಗೂ ನಾಗರಿಕರು ಪಾಲ್ಗೊಂಡಿದ್ದಾರೆ.

**********

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ನಿನ್ನೆ ಅಬುಧಾಬಿಯಲ್ಲಿ ಭಾರತ, ಫ್ರಾನ್ಸ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ನಡುವಿನ ತ್ರಿಪಕ್ಷೀಯ ಸಭೆಯಲ್ಲಿ ಭಾರತಕ್ಕೆ ವಿಶೇಷ ರಾಯಭಾರಿ ರೀಮ್ ಅಲ್ ಹಶಿಮಿ ಮತ್ತು ಫ್ರಾನ್ಸ್‌ನ ಯುರೋಪ್ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಪ್ರಧಾನ ಕಾರ್ಯದರ್ಶಿ ಮಾರ್ಟಿನ್ ಬ್ರಿಯಾನ್ಸ್ ಅವರೊಂದಿಗೆ ಭಾಗವಹಿಸಿದರು. ಮೂರು ದೇಶಗಳು ತಮ್ಮ ಪಾಲುದಾರಿಕೆಯನ್ನು ಬಲಪಡಿಸಲು ಮತ್ತು ಸ್ಪಷ್ಟ ಸಮಯದ ಮಿತಿಯೊಂದಿಗೆ ಮಾರ್ಗಸೂಚಿಯಲ್ಲಿ ಕೆಲಸ ಮಾಡಲು ಒಪ್ಪಿಕೊಂಡಿವೆ ಎಂದು ಸಚಿವಾಲಯ ತಿಳಿಸಿದೆ. ವಿಕ್ರಂ ಮಿಸ್ರಿ ಅವರು, ಮುಬದಲಾ ಹೂಡಿಕೆ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಖಲ್ದೂನ್ ಅಲ್ ಮುಬಾರಕ್ ಅವರನ್ನು ಭೇಟಿಯಾಗಿ ಹೂಡಿಕೆ ಸಹಕಾರದ ಬಗ್ಗೆ ಚರ್ಚಿಸಿದರು.

**********

ಭಾರತದ ಕ್ರೀಡಾ ಭವಿಷ್ಯವು ಕ್ರೀಡಾಪಟುಗಳು, ಒಕ್ಕೂಟಗಳು ಮತ್ತು ಸರ್ಕಾರಗಳ ನಡುವಿನ ಸಮನ್ವಯವನ್ನು ಸಾಧಿಸಿದೆ ಎಂದು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ. ನವದೆಹಲಿಯಲ್ಲಿ ರಾಷ್ಟ್ರೀಯ ಕ್ರೀಡಾ ಒಕ್ಕೂಟ ಸಮಾವೇಶ ೨೦೨೬ಅನ್ನು ಉದ್ದೇಶಿಸಿ ಮಾತನಾಡಿದ ಅವರು, ಕಾಮನ್ವೆಲ್ತ್ ಕ್ರೀಡಾಕೂಟ ೨೦೨೬, ಏಷ್ಯನ್

ಕ್ರೀಡಾಕೂಟ ೨೦೨೬ ಮತ್ತು ಬೇಸಿಗೆ ಒಲಿಂಪಿಕ್ಸ್ ೨೦೨೮ ಸೇರಿದಂತೆ ಮುಂಬರುವ ಜಾಗತಿಕ ಕ್ರೀಡಾಕೂಟಗಳಿಗೆ ಭಾರತದ ಸಿದ್ಧತೆಗೆ ಈ ಸಮಾವೇಶವು ಒಂದು ಸಂಘಟಿತ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ. ಶಿಕ್ಷಣ ಮತ್ತು ಕಠಿಣ ಕಾನೂನು ಕ್ರಮಗಳ ಮೂಲಕ ಭಾರತೀಯ ಕ್ರೀಡಾ ಪರಿಸರ ವ್ಯವಸ್ಥೆಯಿಂದ ಡೋಪಿಂಗ್‌ಅನ್ನು ನಿರ್ಮೂಲನೆ ಮಾಡುವತ್ತ ಸರ್ಕಾರದ ಬದ್ಧತೆಯನ್ನು ತಿಳಿಸಿದ ಅವರು, ದೇಶದಲ್ಲಿ ಸ್ವಚ್ಛ ಮತ್ತು ಪಾರದರ್ಶಕ ಕ್ರೀಡಾ ಸಂಸ್ಕೃತಿಯನ್ನು ನಿರ್ಮಿಸಲು ಫೆಡರೇಷನ್‌ಗಳು, ತರಬೇತುದಾರರು ಮತ್ತು ಬೆಂಬಲ ಸಿಬ್ಬಂದಿ ಸಕ್ರಿಯವಾಗಿ ಕೊಡುಗೆ ನೀಡಬೇಕೆಂದು ಸಚಿವರು ಒತ್ತಾಯಿಸಿದರು.

**********

ಉಜ್ಬೇಕಿಸ್ತಾನದ ತಾಷ್ಕೆಂಟ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ೧೭ ವರ್ಷದೊಳಗಿನ ಬಾಲಕಿಯರು ಅಮೋಘ ಪ್ರದರ್ಶನ ನೀಡಿದ್ದು, ಒಟ್ಟು ೧೨ ಪದಕಗಳನ್ನು ಖಚಿತಪಡಿಸಿಕೊಂಡಿದ್ದಾರೆ. ನಿನ್ನೆ ನಡೆದ ಪಂದ್ಯಗಳಲ್ಲಿ ಭಾರತದ ಬಾಕ್ಸರ್‌ಗಳು ಎದುರಾಳಿಗಳ ವಿರುದ್ಧ ಸಂಪೂರ್ಣ ಪ್ರಾಬಲ್ಯ ಸಾಧಿಸಿದರು. ಪ್ರಮುಖವಾಗಿ ೪೬ ಕೆಜಿ ವಿಭಾಗದಲ್ಲಿ ರಾಖಿ ಮತ್ತು ೫೭ ಕೆಜಿ ವಿಭಾಗದಲ್ಲಿ ನವ್ಯಾ ಚೇನಾ ತೈಪೆ ಹಾಗೂ ಚೇನಾ ವಿರುದ್ಧ ೫:೦ ಅಂತರದ ಜಯ ಸಾಧಿಸಿದರು. ೪೮ ಕೆಜಿ ವಿಭಾಗದಲ್ಲಿ ಖುಷಿ, ೫೨ ಕೆಜಿ ವಿಭಾಗದಲ್ಲಿ ಮಮತಾ, ೫೪ ಕೆಜಿ ವಿಭಾಗದಲ್ಲಿ ಲಕ್ಷ್ಮಿ, ೬೦ ಕೆಜಿ ವಿಭಾಗದಲ್ಲಿ ಇಶಿಕಾ, ೬೬ ಕೆಜಿ ವಿಭಾಗದಲ್ಲಿ ಹರ್ನೂರ್ ಮತ್ತು ೭೦ ಕೆಜಿ ವಿಭಾಗದಲ್ಲಿ ಹಿಮಾಂಶಿ ತಮ್ಮ ಪಂದ್ಯಗಳನ್ನು ಗೆದ್ದು ಮೇಲುಗೈ ಸಾಧಿಸಿದರು. ೭೫ ಕೆಜಿ ವಿಭಾಗದಲ್ಲಿ ಜ್ಯೋತಿ ಮತ್ತು ೮೦ ಕೆಜಿ ಮೇಲಪಟ್ಟವರ ವಿಭಾಗದಲ್ಲಿ ಗುರ್ಸೀರತ್ ಕೂಡ ಗೆಲುವಿನ ನಗೆ ಬೀರಿದರು. ಬಾಲಕರ ವಿಭಾಗದಲ್ಲಿ ನರೇಂದ್ರ ಕುಮಾರ್ ನೆಲ್ಲಾ ಕೂಡ ಭರ್ಜರಿ ಜಯ ದಾಖಲಿಸಿ ಭಾರತದ ಪದಕದ ಪಟ್ಟಿಯನ್ನು ಹಿಗ್ಗಿಸಿದರು.

**********

ಲಖನೌನಲ್ಲಿರುವ ಏಕಾನಾ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಮಳೆಬಾಧಿತ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ತಂಡ, ರಾಯಲ್ ಚ್ಯಾಲೆಂಜರ್ಸ್ ಬೆಂಗಳೂರು ವಿರುದ್ಧ ೯ ರನ್‌ಗಳ ಗೆಲುವು ದಾಖಲಿಸಿದೆ.

*****END*****